**All India Radio: Bangalore**
**Regional Bulletin In Kannada**
**02.09.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**02.09.2025 / 6.40 p.m.**
**<><><><>**

ಮುಖ್ಯಾಂಶಗಳು

- ಧರ್ಮಸ್ಥಳ ಪ್ರಕರಣ ಎನ್‌ಐಎ ತನಿಖೆಗೆ ವಹಿಸುವುದಿಲ್ಲ - ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟನೆ
- ಮುಂದಿನ ವರ್ಷದ ಮಾರ್ಚ್ ವೇಳೆಗೆ ದೇಶದಿಂದ ನಕ್ಸಲರ ಸಂಪೂರ್ಣ ನಿರ್ಮೂಲನೆ - ಕೇಂದ್ರ ಸಚಿವ ಬಂಡಿ ಸಂಜಯ್ ಕುಮಾರ್
- ತರಾತುರಿಯಲ್ಲಿ ಜಾತಿ ಸಮೀಕ್ಷೆ ನಡೆಸದಂತೆ ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಅಧ್ಯಕ್ಷರಿಗೆ ಬಿಜೆಪಿ ನಿಯೋಗ ಒತ್ತಾಯ
- ಇದೇ ೧೩ ರಿಂದ ಗಗನಚುಕ್ಕಿ ಜಲಪಾತೋತ್ಸವ; ಜಿಲ್ಲಾಡಳಿತದಿಂದ ಸಕಲ ಸಿದ್ಧತೆ

<><><><>

ಧರ್ಮಸ್ಥಳ ಪ್ರಕರಣವನ್ನು ರಾಜ್ಯ ಸರ್ಕಾರ ರಾಷ್ಟ್ರೀಯ ತನಿಖಾ ದಳ - ಎನ್‌ಐಎಗೆ ವಹಿಸುವುದಿಲ್ಲ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾರಿ ನಿರ್ದೇಶನಾಲಯ ತನಿಖೆ ನಡೆಸಿದರೆ, ಸರ್ಕಾರದಿಂದ ಅಭ್ಯಂತರವಿಲ್ಲ ಎಂದು ಹೇಳಿದ್ದಾರೆ. ಈಗಾಗಲೇ ಎಸ್‌ಐಟಿ ತನಿಖೆ ನಡೆಸುತ್ತಿರುವಾಗ, ಪ್ರಕರಣವನ್ನು ಬೇರೆ ಸಂಸ್ಥೆಗೆ ವರ್ಗಾಯಿಸುವ ಅಗತ್ಯವಿಲ್ಲ. ತನಿಖೆ ಪೂರ್ಣಗೊಳ್ಳುವವರೆಗೆ ಯಾವುದೇ ವಿವರಗಳನ್ನು ಬಹಿರಂಗಪಡಿಸಲು ಸಾಧ್ಯವಿಲ್ಲ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ.

<><><><>

ಕೇಂದ್ರ ಮೀಸಲು ಪೊಲೀಸ್ ಪಡೆಯು ರಾಷ್ಟ್ರೀಯತೆ, ಸೇವೆ ಮತ್ತು ಬದ್ಧತೆಯ ಸಂಕೇತವಾಗಿದೆ. ಕೇಂದ್ರ ಮೀಸಲು ಪೊಲೀಸ್ ಪಡೆ ಇಲ್ಲದೇ ದೇಶದಲ್ಲಿ ಎಲ್ಲಿಯೂ ಚುನಾವಣೆಗಳನ್ನು ನಡೆಸುವುದು ಕಷ್ಟಸಾಧ್ಯ ಎಂದು ಕೇಂದ್ರ ಗೃಹ ವ್ಯವಹಾರಗಳ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್ ಹೇಳಿದ್ದಾರೆ. ಬೆಳಗಾವಿ ಜಿಲ್ಲೆ ಜಾಂಬೋಟಿ ಬಳಿಯ ತೊರಾಳಿಯ ಸಿ.ಆರ್.ಪಿ.ಎಫ್. ಸಂಸ್ಥೆಯ

ಕೋಬ್ರಾ ಜಂಗಲ್ ಯುದ್ಧ ತರಬೇತಿ ಶಾಲೆ, ಎ.ವಿ.ಹಾಲ್ ಕಟ್ಟಡ, ಎಸ್‌ಒಗಳ ಮೆಸ್ ಮತ್ತು ೧೮೦ ಯೋಧರಿಗೆ ಬ್ಯಾರಕ್‌ಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು. ದೇಶದ ಜನತೆ ಶಾಂತಿಯಿಂದ ಜೀವಿಸುವಲ್ಲಿ ಸಿಆರ್‌ಪಿಎಫ್ ನ ಪಾತ್ರ ಪ್ರಮುಖವಾಗಿದೆ. ನಕ್ಸಲರನ್ನು ನಿರ್ಮೂಲನೆ ಮಾಡುವಲ್ಲಿ ಸಿಆರ್‌ಪಿಎಫ್ ನ ವಿಶೇಷ ವಿಭಾಗವಾದ ಕೋಬ್ರಾ ಪಡೆಗಳ ಪಾತ್ರ ಮುಖ್ಯವಾಗಿದೆ. ಮುಂದಿನ ವರ್ಷದ ಮಾರ್ಚ್ ವೇಳೆಗೆ ದೇಶದಿಂದ ನಕ್ಸಲರನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲಾಗುವುದು ಎಂದರು. ಸಿಆರ್‌ಪಿಎಫ್ ದೇಶದ ಆಂತರಿಕ ಭದ್ರತೆಯ ಬೆನ್ನೆಲುಬಾಗಿದ್ದು, ಉಗ್ರವಾದ, ಭಯೋತ್ಪಾದನೆ, ನೈಸರ್ಗಿಕ ವಿಕೋಪಗಳಲ್ಲಿ, ಸಿಆರ್‌ಪಿಎಫ್ ಸೈನಿಕರು ಸದಾ ಸಿದ್ಧರಿರುತ್ತಾರೆ ಎಂದು ಸಚಿವ ಬಂಡಿ ಸಂಜಯ್ ಕುಮಾರ್ ಹೇಳಿದರು.

**ಧ್ವನಿ : ಬಂಡಿ ಸಂಜಯ್ ಕುಮಾರ್ (೪೦ ಸೆಕೆಂಡ್‌ಗಳು)**

<><><><>

ತರಾತುರಿಯಲ್ಲಿ ಜಾತಿ ಸಮೀಕ್ಷೆ ಬೇಡ ಎಂಬುದಾಗಿ ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಅಧ್ಯಕ್ಷರನ್ನು ಬಿಜೆಪಿ ನಿಯೋಗ ಒತ್ತಾಯಿಸಿದೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಶಾಸಕ ವಿ.ಸುನೀಲ್ ಕುಮಾರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂದು ಬಿಜೆಪಿ ನಿಯೋಗ, ಆಯೋಗದ ಅಧ್ಯಕ್ಷರನ್ನು ಭೇಟಿ ಮಾಡಿದೆ. ೧೫ ದಿನಗಳಲ್ಲಿ ಸಮೀಕ್ಷೆ ಪೂರ್ಣಗೊಳಿಸುತ್ತೇವೆ ಎಂಬುದು ಸರಿಯಲ್ಲ. ಯಾವುದೋ ಒತ್ತಡಕ್ಕೆ ಒಳಗಾಗಿ ಸಮೀಕ್ಷೆ ಮಾಡುವುದು ಸರಿಯಲ್ಲ. ಸುಮಾರು ೨ ಕೋಟಿ ಮನೆಗಳ ಸಮೀಕ್ಷೆ ಸುಲಭ ಸಾಧ್ಯವಲ್ಲ. ಬೇಸಿಗೆ ಕಾಲದಲ್ಲಿ ಸಮೀಕ್ಷೆ ಮಾಡಲು ಒತ್ತಾಯಿಸಿದ್ದೇವೆ ಎಂದರು. ಈ ಹಿಂದೆ ಕಾಂತರಾಜು ಅವರ ನೇತೃತ್ವದಲ್ಲಿ ಆಯೋಗವು ೧೬೫ ಕೋಟಿ ರೂಪಾಯಿ ವೆಚ್ಚದಲ್ಲಿ ವರದಿ ಸಿದ್ಧಪಡಿಸಿತ್ತು. ಆ ವರದಿಯನ್ನು ಸರಕಾರಕ್ಕೆ ಮಂಡಿಸಲಿಲ್ಲ. ೧೬೫ ಕೋಟಿ ರೂಪಾಯಿ ನಿರುಪಯುಕ್ತವಾಗಿತ್ತು. ಬಳಿಕ ೧೧೦ ಕೋಟಿ ರೂಪಾಯಿ ವೆಚ್ಚದಲ್ಲಿ ಒಳ ಮೀಸಲಾತಿ ಕುರಿತು ನ್ಯಾಯಮೂರ್ತಿ ನಾಗಮೋಹನ್‌ದಾಸ್ ಅವರ ನೇತೃತ್ವದ ಆಯೋಗದಿಂದಲೂ ಸಮೀಕ್ಷೆ ನಡೆಯಿತು. ಆ ಸಮೀಕ್ಷೆಯ ಯಾವ ಅಂಶಗಳನ್ನೂ ಸರ್ಕಾರ ಪರಿಗಣಿಸಿಲ್ಲ ಎಂದು ವಿ.ಸುನೀಲ್ ಕುಮಾರ್ ಹೇಳಿದರು.

<><><><>

ಅಬಕಾರಿ ಇಲಾಖೆಯ ಇತಿಹಾಸದಲ್ಲೇ ಮೊದಲ ಬಾರಿಗೆ ಸಾಕಷ್ಟು ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದ್ದಾರೆ. ವಿಧಾನಸೌಧದ

ಸಮ್ಮೇಳನ ಸಭಾಂಗಣದಲ್ಲಿ ಇಂದು ಅಬಕಾರಿ ಇಲಾಖೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೊದಲೆರಡು ತ್ರೈಮಾಸಿಕದಲ್ಲಿ ನಿರೀಕ್ಷಿತ ಪ್ರಮಾಣಕ್ಕಿಂತ ಹೆಚ್ಚಿನ ಆದಾಯ ಬಂದಿದೆ. ೧೮ ಸಾವಿರದ ೨೯೦ ಕೋಟಿ ರೂಪಾಯಿ ಆದಾಯದ ನಿರೀಕ್ಷೆ ಹೊಂದಲಾಗಿತ್ತು. ಆದರೆ, ೧೮ ಸಾವಿರದ ೩೫೮ ಕೋಟಿ ಆದಾಯ ಬಂದಿದ್ದು, ನಿರೀಕ್ಷೆಗಿಂತ ೬೮ ಕೋಟಿ ೭೮ ಸಾವಿರ ರೂಪಾಯಿ ಹೆಚ್ಚಾಗಿದೆ ಎಂದು ಸಚಿವರು ತಿಳಿಸಿದರು. ತೆರಿಗೆ ಸಂಗ್ರಹಣೆ ಇಲಾಖೆಯಲ್ಲಿ ಮೊದಲ ಬಾರಿಗೆ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಮಾಡಲಾಗಿದೆ. ಇದರಿಂದ ಭ್ರಷ್ಟಾಚಾರಕ್ಕೆ ಕಡಿವಾಣ ಬೀಳಲಿದೆ. ಇಲಾಖೆಯಲ್ಲಿ ಡಿಜಿಟಲ್ ವ್ಯವಸ್ಥೆ ಜಾರಿ ಮಾಡಲಾಗುತ್ತಿದ್ದು, ಆನ್‌ಲೈನ್ ಮುಖಾಂತರ  ಪರವಾನಿಗೆ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ.  ಭ್ರಷ್ಟಾಚಾರಕ್ಕೆ ಅವಕಾಶ ಸಿಗದಂತೆ  ಪರವಾನಗಿ ನೀಡುವ ಹಂತಗಳನ್ನು ಕಡಿತಗೊಳಿಸಲಾಗಿದೆ ಎಂದು ಸಚಿವ ತಿಮ್ಮಾಪೂರ ಹೇಳಿದರು.

<><><><>

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಶಿವನಸಮುದ್ರದ ವಿಶ್ವವಿಖ್ಯಾತ ಗಗನಚುಕ್ಕಿ ಜಲಪಾತೋತ್ಸವವು ಈ ಬಾರಿ ಇದೇ ೧೩ ಮತ್ತು ೧೪ರಂದು ನಡೆಯಲಿದೆ ಎಂದು ಶಾಸಕ ಹಾಗೂ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ತಿಳಿಸಿದ್ದಾರೆ. ಈ ಬಗ್ಗೆ ಶಿವನಸಮುದ್ರದದ ಗಗನಚುಕ್ಕಿಯಲ್ಲಿ ಪರಿಶೀಲನೆ ನಡೆಸಿ, ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಜಲಪಾತೋತ್ಸವದ ಯಶಸ್ಸಿಗೆ ಬೇಕಾದ ಸಿದ್ಧತೆಗಳ ಬಗ್ಗೆ ಗಮನ ಹರಿಸುವಂತೆ ಸೂಚಿಸಿದರು. ಪ್ರವಾಸಿಗರನ್ನು ಸೆಳೆಯುವ ನಿಟ್ಟಿನಲ್ಲಿ ಜಲಪಾತೋತ್ಸವಕ್ಕೆ ವಿನೂತನ ಲೈಟಿಂಗ್ಸ್ ಮತ್ತು ಲೇಸರ್ ಶೋ ಇರಲಿದೆ. ಅಲ್ಲದೇ ಜಲಪಾತೋತ್ಸವದ ಬಳಿ ನಡೆಯುವ ವೇದಿಕೆ ಕಾರ್ಯಕ್ರಮದ ನೇರ ಪ್ರಸಾರದ ವ್ಯವಸ್ಥೆ ಇರುತ್ತದೆ ಎಂದು ವಿವರಿಸಿದರು. ಎರಡು ದಿನಗಳ ಕಾರ್ಯಕ್ರಮಕ್ಕೆ ಲಕ್ಷಾಂತರ ಮಂದಿ ಭಾಗಿಯಾಗುವ ನಿರೀಕ್ಷೆ ಇದೆ. ಜಿಲ್ಲಾ ಕೇಂದ್ರದಿಂದ ಸಾರಿಗೆ ಸೌಲಭ್ಯ ಕಲ್ಪಿಸಲಾಗುತ್ತದೆ. ಊಟ, ಕುಡಿಯುವ ನೀರು ಹಾಗೂ ಪ್ರತ್ಯೇಕ ಶೌಚಾಯಲದ ವ್ಯವಸ್ಥೆ ಮಾಡಲಾಗುವುದು. ಕಾರ್ಯಕ್ರಮದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳ ಸಾಂಸ್ಕೃತಿಕ ನೃತ್ಯಗಳಿಗೆ ಅವಕಾಶ ನೀಡುವ ಕುರಿತು ಚಿಂತನೆ ನಡೆಸಲಾಗುವುದು ಎಂದು ಹೇಳಿದರು. ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ, ಕಳೆದ ಬಾರಿಯಂತೆ ಈ ಬಾರಿಯೂ ಕೆಆರ್‌ಎಸ್ ಜಲಾಶಯ ತುಂಬಿದೆ. ಹೀಗಾಗಿ ವೈಭವದ ಜಲಪಾತೋತ್ಸವಕ್ಕಾಗಿ ವೇದಿಕೆ ಸಮಿತಿ, ಸಾಂಸ್ಕೃತಿಕ ಸಮಿತಿ,

ಸಾರಿಗೆ ಸಮಿತಿ, ಆರೋಗ್ಯ ಸಮಿತಿ, ಸ್ವಚ್ಛತಾ ಸಮಿತಿ, ಆಹಾರ ಸಮಿತಿ ಸೇರಿ ವಿವಿಧ ಸಮಿತಿಗಳನ್ನು ರಚಿಸಲಾಗಿದೆ ಎಂದು ತಿಳಿಸಿದರು.

<><><>

ಶಿವಮೊಗ್ಗ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಮುಂಗಾರು ಅವಧಿಯಲ್ಲಿ ನಿರಂತರವಾಗಿ ಸುರಿದ ಭಾರೀ ಮಳೆಯಿಂದಾಗಿ ಸುಮಾರು ೪೫ ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬೆಳೆದ ಅಡಿಕೆ ಬೆಳೆ ಕೊಳೆರೋಗಕ್ಕೆ ತುತ್ತಾಗಿದೆ ಎಂದು ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ವೇಳೆ ನೂರಾರು ಹೆಕ್ಟೇರ್ ಪ್ರದೇಶದಲ್ಲಿ ಬೆಳೆದ ಮೆಕ್ಕೆಜೋಳ ಬೆಳೆಯು ಹಾನಿಗೊಳಗಾಗಿದ್ದು, ಬೆಳೆನಷ್ಟದ ಪ್ರಮಾಣವನ್ನು ತ್ವರಿತವಾಗಿ ಒದಗಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು. ಈಗಾಗಲೇ ಆಗಿರುವ ಬೆಳೆನಷ್ಟಕ್ಕೆ ಸಂಬಂಧಿಸಿದಂತೆ ಪರಿಹಾರ ಕ್ರಮ ಕೈಗೊಳ್ಳುವ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ, ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು. ಅಡಿಕೆ ಕೊಳೆರೋಗ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದ ವಿಜ್ಞಾನಿಗಳೊಂದಿಗೆ ಸಮಾಲೋಚನೆ ನಡೆಸಲಾಗಿದೆ. ಅಲ್ಲದೇ ಸಂಭಾವ್ಯ ಬೆಳೆಹಾನಿಯನ್ನು ತಡೆಗಟ್ಟಲು ಇರುವ ಕ್ರಮಗಳ ಬಗ್ಗೆಯೂ ಮಾಹಿತಿ ಒದಗಿಸುವಂತೆ ಸೂಚಿಸಲಾಗಿದೆ ಎಂದು ಸಚಿವ ಮಧು ಬಂಗಾರಪ್ಪ ಹೇಳಿದರು.

<><><>

ಸಾಗರ ಮಿತ್ರ ಅಭಿಯಾನದಡಿ ೫ ರಿಂದ ೯ನೇ ತರಗತಿಯ ವಿದ್ಯಾರ್ಥಿಗಳನ್ನು ಬಳಸಿಕೊಂಡು ದಾವಣಗೆರೆಯನ್ನು ಪ್ಲಾಸ್ಟಿಕ್ ಮುಕ್ತ ನಗರವಾಗಿಸಲು ಹಲವಾರು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ 'ಪ್ಲಾಸ್ಟಿಕ್ ತ್ಯಜಿಸಿ, ಪರಿಸರ ಮತ್ತು ಆರೋಗ್ಯ ಉಳಿಸಿ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><><>

ನಾರಾಯಣ ನೇತ್ರಾಲಯ ಐ-ಫೌಂಡೇಷನ್ ವತಿಯಿಂದ ಪ್ರತಿವರ್ಷದಂತೆ ಈ ವರ್ಷ ನೇತ್ರದಾನ ಪಾಕ್ಷಿಕ ಆಚರಿಸಲಾಗುತ್ತಿದೆ. ಪಾಕ್ಷಿಕದ ಅಂಗವಾಗಿ ಇದೇ ೮ರವರೆಗೆ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ.

<><><>

ಉದ್ಯೋಗದಾತರು ಮತ್ತು ಉದ್ಯೋಗಿಗಳನ್ನು ನೋಂದಣಿಗೆ ಉತ್ತೇಜಿಸುವ ಯೋಜನೆ-ಸ್ಪ್ರೀ ೨೦೨೫ ಎಂಬ ಯೋಜನೆಯನ್ನು ಕಾರ್ಮಿಕರ ವಿಮಾ ನಿಗಮ ಜಾರಿಗೆ ತಂದಿದ್ದು, ಈ ಯೋಜನೆಯು ಜುಲೈ ೧ ರಿಂದ ಡಿಸೆಂಬರ್ ೩೧ರ ವರೆಗೆ ಚಾಲ್ತಿಯಲ್ಲಿರುತ್ತದೆ. ಉದ್ಯೋಗದಾತರು ತಮ್ಮಲ್ಲಿ ಕಾರ್ಯನಿರ್ವಹಿಸುವ ಗುತ್ತಿಗೆ ಉದ್ಯೋಗಿಗಳನ್ನು ಒಳಗೊಂಡತೆ ಎಲ್ಲಾ ಉದ್ಯೋಗಿಗಳನ್ನು ಈ ಯೋಜನೆಯಡಿಯಲ್ಲಿ ನೋಂದಾಯಿಸಿದರೆ, ನೋಂದಣಿ ದಿನದಿಂದಲೇ ಕಾರ್ಮಿಕರ ವಿಮಾ ಕಾಯ್ದೆಯಡಿ ದೊರೆಯುವ ವಿವಿಧ ಸೌಲಭ್ಯಗಳನ್ನು ಪಡೆಯಲು ಅರ್ಹರಾಗುತ್ತಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>